# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1182 (1475)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ವಿಷಯ : ಹಿಂದುಳಿದ ವರ್ಗಕ್ಕೆ ಸೇರಿಸುವ ಬಗ್ಗೆ

(ಅ) ಅನೇಕ ಜಾತಿಗಳವರು ತಮ್ಮನ್ನು ಹಿಂದುಳಿದ ವರ್ಗಕ್ಕೆ ಸೇರಿಸಿ ಮೀಸಲಾತಿ ಮತ್ತು ಇತರ ಸೌಲಭ್ಯಗಳನ್ನು ನೀಡಬೇಕೆಂದು ಒತ್ತಾಯಿಸುತ್ತಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;

(ಆ) ಚಳುವಳಿ ಮೂಲಕ ಒತ್ತಾಯ ತರುವ ಜಾತಿಗಳನ್ನು ಹಿಂದುಳಿದ ವರ್ಗಕ್ಕೆ ಸೇರಿಸಿದರೆ ನಿಜವಾಗಿ ಹಿಂದುಳಿದ ಜಾತಿ ಮತ್ತು ವರ್ಗಕ್ಕೆ ಸೇರಿರುವ ಅಸಂಘಟಿತ ಜಾತಿಯವರಿಗೆ ಅನ್ಯಾಯವಾಗುವುದಿಲ್ಲವೇ;

(ಇ) ಹಿಂದುಳಿದ ವರ್ಗಕ್ಕೆ ಸೇರಿಸಲು ಸೂಕ್ತ ಮಾನದಂಡಗಳನ್ನು ನಿಗದಿಪಡಿಸಿ ಅರ್ಹರಾಗಿರುವವರನ್ನ ಹಿಂದುಳಿದ ವರ್ಗಕ್ಕೆ ಸೇರಿಸುವ ನಿರ್ಧಾರ ಪ್ರಕಟಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ತೆಗೆದುಕೊಳ್ಳಲಿದೆ ?